# Bangalore
# Regional News
# 22.06.2024 / 18.40 hrs

### ಆಕಾಶವಾಣಿ ಬೆಂಗಳೂರು
### ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಮುಂಬರುವ ಸ್ಥಳೀಯ ಚುನಾವಣೆಯಲ್ಲಿ ಬಿಜೆಪಿ ಜೆಡಿಎಸ್ ಮೈತ್ರಿ - ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ

೨. ಬೀದರ್‌ಗೆ ನಾಗರಿಕ ವಿಮಾನಯಾನ ಸೇವೆ ಪುನರಾರಂಭಿಸುವಂತೆ ಸರ್ಕಾರಕ್ಕೆ ಸಚಿವ ಈಶ್ವರ್ ಖಂಡ್ರೆ ಪತ್ರ

೩. ರೇಣುಕಾಸ್ವಾಮಿ ಹತ್ಯೆ ಪ್ರಕರಣ ; ಆರೋಪಿ ದರ್ಶನ್ ಸೇರಿ ನಾಲ್ವರಿಗೆ ನ್ಯಾಯಾಂಗ ಬಂಧನ

೪. ಹಿರಿಯ ಸಾಹಿತಿ ನಾಡೋಜ ಡಾ. ಕಮಲಾ ಹಂಪನಾ ನಿಧನ ; ರವೀಂದ್ರ ಕಲಾಕ್ಷೇತ್ರದಲ್ಲಿ ಗಣ್ಯರಿಂದ ಅಂತಿಮ ನಮನ

**<><*<><>*><>**

ದಕ್ಷಿಣ ಭಾರತದಲ್ಲಿ ಕರ್ನಾಟಕವು ಬಿಜೆಪಿಯ ಭದ್ರಕೋಟೆ ಎಂಬುದು ಲೋಕಸಭಾ ಚುನಾವಣೆಯಲ್ಲಿ ಮತ್ತೊಮ್ಮೆ ಸಾಬೀತಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ, ಶಾಸಕ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ರಾಜ್ಯದ ೧೯ ನೂತನ ಎನ್‌ಡಿಎ ಸಂಸದರ ಸನ್ಮಾನದಲ್ಲಿ ಮಾತನಾಡಿದ ಅವರು ಬಿಜೆಪಿ-ಜೆಡಿಎಸ್ ಒಟ್ಟಾಗಿರುವುದಕ್ಕೆ ರಾಜ್ಯದ ಜನರ ಆಶೀರ್ವಾದ ಲಭಿಸಿದೆ. ರಾಜ್ಯದಲ್ಲಿ ೧೯ ನೂತನ ಎನ್‌ಡಿಎ ಸಂಸದರ ಆಯ್ಕೆಗೆ ಕಾರಣಕರ್ತರಾದ ಎಲ್ಲ ಕಾರ್ಯಕರ್ತರಿಗೆ ಅಭಿನಂದನೆಗಳು ಎಂದು ಹೇಳಿದರು. ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಮಾತನಾಡಿ, ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗಳಿಗೆ ಹಣ ಹೊಂದಿಸಲು ಹೆಣಗಾಡುತ್ತಿದೆ ಎಂದು ಹೇಳಿದರು. ಜೆಡಿಎಸ್, ಬಿಜೆಪಿಯದ್ದು, ಸಹಜ ಮೈತ್ರಿಯಾಗಿದ್ದು, ಮುಂದಿನ ದಿನಗಳಲ್ಲಿ ನಡೆಯುವ ಪಾಲಿಕೆ ಚುನಾವಣೆ, ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಚುನಾವಣೆಗೂ ಸಜ್ಜಾಗಬೇಕಿದೆ ಎಂದು ಕರೆ ನೀಡಿದರು. ಬಿಜೆಪಿ, ಜೆಡಿಎಸ್ ಮೈತ್ರಿ ಕಾಂಗ್ರೆಸ್ ನಾಯಕರ ನಿದ್ದೆಗೆಡಿಸಿದೆ ಎಂದು ಕೇಂದ್ರ ಸಚಿವ ಸೋಮಣ್ಣ ಹೇಳಿದರು.

**<><*<><>*><>**

ಬೀದರ್ ನಗರಕ್ಕೆ ನಾಗರಿಕ ವಿಮಾನಯಾನ ಸೇವೆ ಪುನಾರಂಭಿಸುವ ನಿಟ್ಟಿನಲ್ಲಿ ವಿಮಾನಯಾನ ಸಂಸ್ಥೆಗಳೊಂದಿಗೆ ಸಭೆ ನಡೆಸುವಂತೆ ಅರಣ್ಯ, ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ, ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ಅವರಿಗೆ ಮನವಿ ಮಾಡಿದ್ದಾರೆ. ಈ ಸಂಬಂಧ ಪತ್ರ ಬರೆದಿರುವ ಅವರು, ಬೀದರ್‌ನಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಮಾನಯಾನ ಸೌಲಭ್ಯದ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ. ಬೆಂಗಳೂರಿನಿಂದ ಸುಮಾರು ೭೦೦ ಕಿಲೋಮೀಟರ್ ದೂರದಲ್ಲಿರುವ ಬೀದರ್‌ಗೆ ರಸ್ತೆ ಮತ್ತು ರೈಲು ಮಾರ್ಗವಾಗಿ ತಲುಪಲು ೧೫-೧೬ ಗಂಟೆ ವ್ಯಯವಾಗುತ್ತದೆ. ಬೀದರ್ ಜಿಲ್ಲಾ ಕೇಂದ್ರಕ್ಕೆ ಉಡಾನ್ ಯೋಜನೆಯಡಿಯಲ್ಲಿ ನಾಗರಿಕ ವಿಮಾನಯಾನ ಸೇವೆ ಆರಂಭಿಸಿದ್ದರಿಂದ ಇಲ್ಲಿನ ಉದ್ಯಮಿಗಳಿಗೆ, ವಿದ್ಯಾರ್ಥಿಗಳಿಗೆ, ಸಂದರ್ಶನಕ್ಕೆ ಹೋಗುವ ಅಭ್ಯರ್ಥಿಗಳಿಗೆ, ಪ್ರವಾಸಿಗರಿಗೆ, ನಾಗರಿಕರಿಗೆ ತುಂಬಾ ಅನುಕೂಲವಾಗಿತ್ತು. ಆದರೆ ಈಗ ವಿಮಾನಯಾನ ಸೇವೆ ಸ್ಥಗಿತಗೊಂಡಿರುವುದರಿಂದ ಅನಾನುಕೂಲವಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ರೇಣುಕಾ ಸ್ವಾಮಿ ಹತ್ಯೆ ಪ್ರಕರಣದ ಎರಡನೇ ಆರೋಪಿ ದರ್ಶನ್ ಹಾಗೂ ಇತರೆ ಆರೋಪಿಗಳಾದ ವಿನಯ್, ಪ್ರದೋಷ್, ಧನರಾಜ್‌ಗೆ ೧೩ ದಿನಗಳ ನ್ಯಾಯಾಂಗ ಬಂಧನ ವಿಧಿಸಲಾಗಿದೆ. ವಿಚಾರಣೆ ನಡೆಸಿದ ಬೆಂಗಳೂರಿನ ೨೪ನೇ ಎಸಿಎಂಎಂ ನ್ಯಾಯಾಲಯ ಜುಲೈ ೪ ರವರೆಗೆ ನ್ಯಾಯಾಂಗ ಬಂಧನ ವಿಧಿಸಿದೆ. ಈ ಹಿನ್ನೆಲೆಯಲ್ಲಿ ೨ನೇ ಆರೋಪಿ ದರ್ಶನ್ ಸೇರಿದಂತೆ ಎಲ್ಲಾ ಆರೋಪಿಗಳು ಪರಪ್ಪನ ಅಗ್ರಹಾರ ಜೈಲು ಪಾಲಾಗಿದ್ದಾರೆ. ಇದೇ ಪ್ರಕರಣದಲ್ಲಿ ಆರೋಪಿಗಳಾದ ಪವಿತ್ರಾ ಹಾಗೂ ಇತರರಿಗೆ ೨ ದಿನಗಳ ಹಿಂದೆಯೇ ನ್ಯಾಯಾಂಗ ಬಂಧನ ವಿಧಿಸಲಾಗಿತ್ತು.

<><*<><>*><>

ಕಲಬುರಗಿ ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ವಾಡಿಕೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗಿದ್ದು, ಬಿತ್ತನೆ ಶುರುವಾಗಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಬಿತ್ತನೆ ಬೀಜ ಮತ್ತು ರಸಗೊಬ್ಬರ ಕೊರತೆಯಾಗದಂತೆ ಕೃಷಿ ಅಧಿಕಾರಿಗಳು ಎಚ್ಚರ ವಹಿಸಬೇಕು ಎಂದು ಸೂಚಿಸಿದ್ದಾರೆ. ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಮಾತನಾಡಿ ಜಿಲ್ಲೆಯಲ್ಲಿ ಡಿ.ಎ.ಪಿ.ರಸಗೊಬ್ಬರ ಕೊರತೆ ಎದ್ದು ಕಾಣುತ್ತಿದ್ದು, ಆರ್.ಎಸ್.ಕೆ. ಕೇಂದ್ರದಲ್ಲಿ ಡಿ.ಎ.ಪಿ. ದಾಸ್ತಾನು ಮಾಡಬೇಕೆಂದು ತಿಳಿಸಿದ್ದಾರೆ.

<><*<><>*><>

ಕಲ್ಯಾಣ ಕರ್ನಾಟಕ ಭಾಗದ ಮಕ್ಕಳಿಗೆ ಸೂಪರ್ ಸ್ಪೆಷಾಲಿಟಿ ಚಿಕಿತ್ಸೆ ನೀಡುವ ದೃಷ್ಟಿಯಿಂದ ಪ್ರತಿಷ್ಠಿತ ಇಂದಿರಾ ಗಾಂಧಿ ಮಕ್ಕಳ ಆಸ್ಪತ್ರೆಯ ಶಾಖೆಗೆ ಕಲಬುರಗಿಯಲ್ಲಿ ಮುಂದಿನ ೩-೪ ತಿಂಗಳಿನಲ್ಲಿ ಅಡಿಗಲ್ಲು ಹಾಕಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ್ ತಿಳಿಸಿದ್ದಾರೆ. ಕಲಬುರಗಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆವರಣದಲ್ಲಿ ಹಲವು ಚಿಕಿತ್ಸಾ ಘಟಕ ನಿರ್ಮಾಣ ಕಾಮಗಾರಿಯ ಅಡಿಗಲ್ಲು ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇದಕ್ಕಾಗಿ ೯೦ ಕೋಟಿ ವ್ಯಯ ಮಾಡಲಾಗುತ್ತಿದೆ ಎಂದು ಹೇಳಿದರು. ಎಐಸಿಸಿ ಅಧ್ಯಕ್ಷ ಡಾ.ಮಲ್ಲಿಕಾರ್ಜುನ ಖರ್ಗೆ ಸದಾಶಯದಂತೆ ಕಲಬುರಗಿಯನ್ನು ಮೆಡಿಕಲ್ ಹಬ್ ಆಗಿ ಮಾಡಲಾಗುತ್ತಿದ್ದು, ಸರ್ಕಾರ ಬಡ ಜನರಿಗೆ ಗುಣಮಟ್ಟ ಮತ್ತು ಉಚಿತ ಚಿಕಿತ್ಸೆ ನೀಡುವ ಗುರಿ ಹೊಂದಿದೆ ಎಂದರು.

<><*<><>*><>

ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮವು ರಾಜ್ಯದ ಯುವಕರಿಗೆ ಹೊರ ದೇಶಗಳಲ್ಲಿ ಉದ್ಯೋಗ ಒದಗಿಸುವ ಮಹತ್ವದ ಯೋಜನೆಯನ್ನು ಅನುಷ್ಠಾನಗೊಳಿಸಿದೆ. ಇದರ ಭಾಗವಾಗಿ ಸ್ಲೋವಾಕಿಯಾದಲ್ಲಿ ಬಿಇ, ಡಿಪ್ಲೊಮೊ, ಐಟಿಐ ಮತ್ತಿತರ ವೃತ್ತಿಪರ ಕೋರ್ಸ್‌ಗಳನ್ನು ಮುಗಿಸಿದ ೯೪ ಯುವಕರಿಗೆ ಉದ್ಯೋಗ ನೀಡುವಲ್ಲಿ ಕೌಶಲ್ಯಾಭಿವೃದ್ಧಿ ನಿಗಮ ಯಶಸ್ವಿಯಾಗಿದೆ. ಸಚಿವ ಶರಣ ಪ್ರಕಾಶ್ ಪಾಟೀಲ್ ಮಾತನಾಡಿ, ಕೆಎಸ್‌ಡಿಸಿ ೩೨ ಚಾಲಕರನ್ನು ಹಂಗೇರಿ ದೇಶಕ್ಕೆ ಕಳುಹಿಸಿಕೊಟ್ಟಿದೆ. ಅಲ್ಲದೇ ಆಸ್ಟ್ರೇಲಿಯಾ, ಜಪಾನ್, ಫಿನ್‌ಲ್ಯಾಂಡ್, ಜರ್ಮನಿ, ನಾರ್ವೆಯಿಂದ ದಾದಿಯರ ಬೇಡಿಕೆಯನ್ನು ಪೂರೈಸಲು ಮುಂದಾಗಿದೆ ಎಂದು ತಿಳಿಸಿದರು.

<><*<><>*><>

ಹಿರಿಯ ಸಾಹಿತಿ ನಾಡೋಜ ಡಾ. ಕಮಲಾ ಹಂಪನಾ ಪಾರ್ಥಿವ ಶರೀರದ ಅಂತಿಮ ದರ್ಶನವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ರವೀಂದ್ರ ಕಲಾಕ್ಷೇತ್ರದಲ್ಲಿ ಪಡೆದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ, ಸಾಹಿತಿ ಹಂಪನಾ ಮತ್ತು ಬರಗೂರು ರಾಮಚಂದ್ರಪ್ಪ ಸೇರಿ ಹಲವು ಗಣ್ಯರು ಅಂತಿಮ ನಮನ ಸಲ್ಲಿಸಿದರು. ಈ ವೇಳೆ, ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಕನ್ನಡದ ಉತ್ತಮ ಸಾಹಿತಿಯನ್ನು ಕಳೆದುಕೊಂಡಿದ್ದೇವೆ, ಕಮಲಾ ಹಂಪನಾ, ಬೋಧಕರಾಗಿ, ಸಂಶೋಧಕರಾಗಿ, ಸಾಹಿತಿಯಾಗಿ ಕನ್ನಡ ಭಾಷೆಗಾಗಿ ಬಹಳ ಶ್ರಮಿಸಿದ್ದಾರೆ. ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಹಂಪನಾ ಮತ್ತು ಅವರ ಕುಟುಂಬದವರಿಗೆ ದುಃಖ ಭರಿಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ತಿಳಿಸಿದರು.

<><*<><>*><>

ಅಪರಾಧ ಪ್ರಕರಣಗಳಲ್ಲಿ ವಿಧಿವಿಜ್ಞಾನ ವೈದ್ಯಶಾಸ್ತ್ರದ ಪಾತ್ರ ಮಹತ್ತರವಾಗಿರುತ್ತದೆ ಎಂದು ವೈದ್ಯಕೀಯ ಶಿಕ್ಷಣ ಇಲಾಖೆ ನಿರ್ದೇಶಕಿ ಡಾ.ಬಿ.ಎಲ್. ಸುಜಾತ ರಾಥೋಡ್ ಹೇಳಿದ್ದಾರೆ. ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದ ವಿಜ್ಞಾನಶಾಸ್ತ್ರ ವಿಭಾಗದ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಕೆಲ ಪ್ರಕರಣದಲ್ಲಿ ವಿಧಿವಿಜ್ಞಾನ ಪ್ರಯೋಗಾಲಯ ನೀಡುವ ವರದಿಯೇ ನಿರ್ಣಾಯಕವಾಗುತ್ತದೆ. ಹೀಗಾಗಿ ವೈದ್ಯಕೀಯ ಅಧ್ಯಯನದಲ್ಲಿ ಸಂಶೋಧನೆ ಹೆಚ್ಚಾಗಬೇಕು ಕರೆ ನೀಡಿದರು.

<><*<><>*><>

ಹಸಿರು ಅಭಿಯಾನದ ಅಂಗವಾಗಿ ನೈಋುತ್ಯ ರೈಲ್ವೆ ಹುಬ್ಬಳ್ಳಿ ವಲಯ ಸೈಕ್ಲೋಥಾನ್ ಆಯೋಜಿಸಿತ್ತು. ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಪ್ರಧಾನ ವ್ಯವಸ್ಥಾಪಕ ಅರವಿಂದ ಶ್ರೀವಾತ್ಸವ ಸೈಕ್ಲೋಥಾನ್ ಪ್ರಾಮುಖ್ಯತೆಯನ್ನು ತಿಳಿಸಿದರು. ವಾತಾವರಣದಲ್ಲಿ ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡುವಲ್ಲಿ ಸೈಕ್ಲಿಂಗ್ ಧನಾತ್ಮಕ ಪರಿಣಾಮ ಬೀರಲಿದೆ ಎಂದು ಹೇಳಿದರು. ಸೈಕ್ಲೋಥಾನ್‌ನಲ್ಲಿ ರೈಲ್ವೆ ಅಧಿಕಾರಿಗಳು, ನೌಕರರು ಮತ್ತು ಉತ್ಸಾಹಿ ಸೈಕಲ್ ಸವಾರರು ಭಾಗವಹಿಸಿದ್ದರು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮಕ್ಕಳ ಸಹಾಯವಾಣಿಗೆ ಬಂದ ದೂರಿನ ಹಿನ್ನಲೆಯಲ್ಲಿ ೯ ಮಕ್ಕಳನ್ನು ರಕ್ಷಣೆ ಮಾಡಲಾಗಿದೆ. ಜಿಲ್ಲಾ ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಂಟಿಯಾಗಿ ದೇವನಹಳ್ಳಿ ತಾಲ್ಲೂಕಿನ ಕಸ ವಿಂಗಡಣೆ ಘಟಕದಲ್ಲಿ ಅನಿರೀಕ್ಷಿತ ದಾಳಿ ನಡೆಸಿ ಮಕ್ಕಳನ್ನು ರಕ್ಷಿಸಿದ್ದಾರೆ. ಒಂಭತ್ತು ಮಕ್ಕಳು ಶಾಲೆಯಿಂದ ಹೊರ ಉಳಿದು ಪೋಷಕರ ಜೊತೆಯಲ್ಲಿ ವಾಸವಾಗಿದ್ದರು. ಮಕ್ಕಳು ಪಶ್ಚಿಮ ಬಂಗಾಳ ಹಾಗೂ ಅಸ್ಸಾಂ ರಾಜ್ಯದವರಾಗಿದ್ದು, ಬಾಲ ಮಂದಿರಕ್ಕೆ ಹಸ್ತಾಂತರಿಸಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ನಾಗೇಂದ್ರ ಹೆಚ್.ಆರ್ ತಿಳಿಸಿದ್ದಾರೆ.

<><*<><>*><>

ಎನ್.ಪಿ.ಸಿ.ಐ.ಎಲ್. ಕೈಗಾ ಅಣು ವಿದ್ಯುತ್ ಉತ್ಪಾದನಾ ಕೇಂದ್ರ, ಕ್ರಿಮ್ಸ್ ಕಾರವಾರ ಹಾಗೂ ಕೆ.ಜಿ.ಎಸ್. ಆಸ್ಪತ್ರೆ ಇವರ ಸಹಭಾಗಿತ್ವದೊಂದಿಗೆ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಉತ್ತರಕನ್ನಡ ಜಿಲ್ಲೆಯ ಕಾರವಾರ ತಾಲೂಕಿನ ಕೈಗಾ ದಲ್ಲಿ ನಡೆಯಿತು. ಕೈಗಾ ಯೋಜನಾ ನಿರ್ದೇಶಕ ಪ್ರಮೋದ ರಾಯಚೂರು ಮಾತನಾಡಿ, ರಕ್ತದಾನ ಅತ್ಯಂತ ಶ್ರೇಷ್ಠ ದಾನವಾಗಿದೆ. ರಕ್ತದಾನದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅಗತ್ಯ ಎಂದು ಹೇಳಿದರು.

<><*<><>*><>

<u>ಸಂಕ್ಷಿಪ್ತ ಸುದ್ದಿಗಳು</u>

೧. ಗದಗ ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಥೋಡ್ ಮಾರ್ಗದರ್ಶನದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ತನಿಖಾದಳದ ವತಿಯಿಂದ ಗದಗ ಬೇಟಗೇರಿ ಅವಳಿನಗರದ ವಿವಿಧ ಸ್ಥಳಗಳಲ್ಲಿ ದಾಳಿ ನಡೆಸಿ ಒಟ್ಟು ೧೨ ಪ್ರಕರಣಗಳನ್ನು ದಾಖಲಿಸಲಾಗಿದೆ.

೨. ಕೋಲಾರ ನಗರ ಹೊರವಲಯದ ಹೊನ್ನೇನಹಳ್ಳಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಯುವಕ-ಯುವತಿಯರಿಗಾಗಿ ಉಚಿತ ಹೈನುಗಾರಿಕೆ ಮತ್ತು ಎರೆಹುಳು ಗೊಬ್ಬರ ತಯಾರಿಕಾ ತರಬೇತಿ ಹಮ್ಮಿಕೊಳ್ಳಲಾಗಿದೆ. ಇದೇ ೨೪ ರಿಂದ ತರಬೇತಿ ಆರಂಭವಾಗಲಿದ್ದು, ಆಸಕ್ತರು ಅರ್ಜಿ ಸಲ್ಲಿಸಬಹುದಾಗಿದೆ.

೩. ಉಡುಪಿ ನಗರಸಭಾ ವ್ಯಾಪ್ತಿಯ ರಸ್ತೆ ಬದಿಗಳಲ್ಲಿ ಯಾವುದೇ ಕಟ್ಟಡ ಹಾಗೂ ರಸ್ತೆ ಕಾಮಗಾರಿಗಾಗಿ ಬಳಸುವ ಸಾಮಾಗ್ರಿಗಳನ್ನು, ಶೇಖರಿಸಲು ಅವಕಾಶ ಇರುವುದಿಲ್ಲ ಎಂದು ನಗರಸಭೆ ಪೌರಾಯುಕ್ತರ ಕಚೇರಿ ಪ್ರಕಟಣೆ ತಿಳಿಸಿದೆ.

೪. ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದಲ್ಲಿ ಜಿಲ್ಲಾಡಳಿತದ ವತಿಯಿಂದ ಜನಸ್ಪಂದನ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ರಮೇಶ ಬಂಡಿಸಿದ್ದೇಗೌಡ, ಶ್ರೀರಂಗಪಟ್ಟಣ ತಾಲ್ಲೂಕು ಅಭಿವೃದ್ಧಿ ಕುರಿತಂತೆ ಹಲವಾರು ಯೋಜನೆಗಳು ಜಾರಿಯಲ್ಲಿದೆ ಎಂದು ಹೇಳಿದ್ದಾರೆ.

೫. ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿಗೆ ಪದವಿ, ಸ್ನಾತಕೋತರ ಮತ್ತು ಡಿಪ್ಲೋಮಾ ಪಡೆದು ಅರ್ಹತೆ ಹೊಂದಿದ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ ಎಂದು ರಾಮನಗರ ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ರಾಜ್ಯದ ದಕ್ಷಿಣ ಒಳನಾಡು ಮತ್ತು ಕರಾವಳಿಯಲ್ಲಿ ಮುಂದಿನ ೫ ದಿನಗಳಲ್ಲಿ ಭಾರಿ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕರಾವಳಿ ಭಾಗದಲ್ಲಿ ಬಿರುಗಾಳಿ ಸಹಿತ ವ್ಯಾಪಕ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಮುನ್ನೆಚ್ಚರಿಕೆ ನೀಡಲಾಗಿದೆ. ದಕ್ಷಿಣ ಕನ್ನಡ, ಉಡುಪಿ, ಕರಾವಳಿ ತೀರದಲ್ಲಿ ೨.೫ ರಿಂದ ೨.೭ ಮೀಟರ್ ವ್ಯಾಪ್ತಿಯಲ್ಲಿ ಎತ್ತರದ ಅಲೆಗಳು ಸಂಭವಿಸಬಹುದೆಂದು ಹವಾಮಾನ ಇಲಾಖೆ ತಿಳಿಸಿದೆ.

ದಕ್ಷಿಣ ಒಳನಾಡಿನ ಕೆಲವೆಡೆ ಬಲವಾದ ಗಾಳಿ ಮತ್ತು ಭೂಕುಸಿತವಾಗುವ ಸಾಧ್ಯತೆಗಳಿವೆ. ಅಂಕೋಲಾ, ಕುಮುಟಾದಲ್ಲಿ ತಲಾ ೫ ಸೆಂಟಿಮೀಟರ್, ಉಡುಪಿ, ಸಿದ್ಧಾಪುರ, ಕೊಲ್ಲೂರು, ಕೋಟಾದಲ್ಲಿ ತಲಾ ೪ ಸೆಂಟಿಮೀಟರ್ ಮಳೆಯಾಗಿದೆ.

ಬೆಂಗಳೂರು ಸುತ್ತಮುತ್ತ ಮೋಡಕವಿದ ವಾತಾವರಣ. ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ.

**<><*<><>*><>**